**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಇವರು ಮಂಡಿಸಿರುವ ನಿಯಮ 330ರ ಸೂಚನೆಗೆ ಸರ್ಕಾರದ ಉತ್ತರ**

* * *

ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರೌಢಶಾಲೆಗಳು, ಅನುದಾನಿತ ಪ್ರೌಢಶಾಲೆಗಳು ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜುಗಳ ಸಹ ಶಿಕ್ಷಕರು ಮತ್ತು ಉಪನ್ಯಾಸಕರುಗಳ ನೇಮಕಾತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಎರಡು ವರ್ಷಗಳ ವಯೋಮಿತಿ ಸಡಿಲಿಕೆಯನ್ನು ನೀಡಿರುವುದು ಅಭಿನಂದನೀಯವಾಗಿರುತ್ತದೆ.

ಆದರೆ ಅನುದಾನಿತ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕಾತಿಯಲ್ಲಿ ಎರಡು ವರ್ಷಗಳ ವಯೋಮಿತಿ ಸಡಿಲಿಕೆಯನ್ನು ನೀಡದಿರುವುದು ದುರಾದೃಷ್ಟಕರ ಸಂಗತಿಯಾಗಿದೆ. ಆದ್ದರಿಂದ ಸರ್ಕಾರವು ಉಪನ್ಯಾಸಕರ ನೇಮಕಾತಿಯಲ್ಲಿ ಅನುದಾನಿತ ಪದವಿಪೂರ್ವ ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಎರಡು ವರ್ಷಗಳ ವಯೋಮಿತಿ ಸಡಿಲಿಕೆಯನ್ನು ನೀಡಿ ಆದೇಶ ಹೊರಡಿಸಲು ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

*********

ಸರ್ಕಾರಿ ಶಾಲೆಗಳಲ್ಲಿನ ಮಂಜೂರಾದ ಹುದ್ದೆಗಳಿಗೆ ಹಲವು ಬಾರಿ ನೇಮಕಾತಿ ಪ್ರಕ್ರಿಯೆಗಳನ್ನು ನಡೆಸಿದಾಗ್ಯೂ ಅರ್ಹ ಅಭ್ಯರ್ಥಿಗಳು ಲಭ್ಯವಾಗದ ಕಾರಣ ಹಾಗೂ ಕೋವಿಡ್-19ರ ಹಿನ್ನೆಲೆಯಲ್ಲಿ, ಸರ್ಕಾರಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6 ರಿಂದ 8ನೇ ತರಗತಿ) ಹುದ್ದೆಯ ನೇಮಕಾತಿಗಾಗಿ **"ಒಂದು ಬಾರಿಗೆ ಮಾತ್ರ"** ಅನ್ವಯವಾಗುವಂತೆ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ) ನಿಯಮಗಳು, 2022 ಅನ್ನು ಜಾರಿಗೆ ತರಲಾಗಿದೆ. ಈ ವಿಶೇಷ ನೇಮಕಾತಿ ನಿಯಮಗಳಲ್ಲಿ ಈ ಹಿಂದೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಲಾಗಿದ್ದ ವಯೋಮಿತಿಯನ್ನು ಗರಿಷ್ಠ 02 ವರ್ಷಗಳಿಗೆ ಹೆಚ್ಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿನ ನೇಮಕಾತಿಗಳಿಗೆ 02 ವರ್ಷಗಳ ಗರಿಷ್ಠ ವಯೋಮಿತಿ ವಿನಾಯಿತಿ ನೀಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ ಎಂಬ ಅಂಶವನ್ನು ಮಾನ್ಯ ಸದನದ ಗಮನಕ್ಕೆ ತರಬಯಸುತ್ತೇನೆ.

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು

ಸಂಖ್ಯೆ:ಇಪಿ 186 ಡಿಜಿಡಬ್ಲ್ಯೂ 2022